# ಇಲಾಖಾ ವಿಚಾರಣೆಗೆ ಮಧ್ಯಂತರ ತಡೆ

**ಬೆಂಗಳೂರು:** ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಸದ್ಯ ಅಮಾನತುಗೊಂಡಿರುವ ಎಸ್. ಮೂರ್ತಿ ವಿರುದ್ಧದ ಚಾರ್ಜ್‌ಶೀಟ್ ಹಾಗೂ ಇಲಾಖಾ ವಿಚಾರಣೆಗೆ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ನೀಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧದ ಚಾರ್ಜ್‌ಶೀಟ್ ಹಾಗೂ ಇಲಾಖಾ ವಿಚಾರಣೆ ರದ್ದುಗೊಳಿಸಬೇಕೆಂದು ಕೋರಿ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ. ಕೃಷ್ಣ ದೀಕ್ಷಿತ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ಈ ಮಧ್ಯಂತರ ತಡೆ ನೀಡಿ ಆದೇಶಿಸಿದೆ. ವಿಧಾನಸಭೆ ಸ್ಪೀಕರ್ ಶಿಫಾರಸಿನಂತೆ ವಿಧಾನಸಭೆ ಕಾರ್ಯದರ್ಶಿಯಾಗಿದ್ದ ಎಸ್. ಮೂರ್ತಿ ಯವರನ್ನು ಸೇವೆಯಿಂದ ಅಮಾನತುಗೊಳಿಸಿ ವಿಧಾನಸಭೆ ಅಧೀನ ಕಾರ್ಯದರ್ಶಿ 2018ರ ಡಿ. 27ರಂದು ಆದೇಶ ಹೊರಡಿಸಿದ್ದರು. 2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರೆ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ ಎಂದು ಮೂರ್ತಿ ವಿರುದ್ಧ ಆರೋಪ ಮಾಡಲಾಗಿತ್ತು.